ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/177/ಎಜಿಪಿ/2018-19/ಬಸ್ಥಾವಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು. ದಿನಾಂಕ: 27.10.2022

## ಸುತ್ತೋಲೆ

ವಿಷಯ : ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಖಾಸಗಿ ಅನುದಾನಿತ ಪದವಿ, ಶಿಕ್ಷಣ ಹಾಗೂ ಕಾನೂನು ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು, ದೈಹಿಕ ಶಿಕ್ಷಣ ಬೋಧಕರುಗಳಿಗೆ ಪರಿಷ್ಕೃತ 2016ರ ಯುಜಿಸಿ ವೇತನಶ್ರೇಣಿಯಲ್ಲಿ ಲೆವೆಲ್ 12 ರಿಂದ 13 ಎ ಲೆವೆಲ್‌ಗೆ (ರೂ. 9000/- ಎಜಿಪಿ) ಅನುಮೋದಿಸುವ ಬಗ್ಗೆ.

ಉಲ್ಲೇಖ : 1. ಯುಜಿಸಿಯ ಅಧಿಸೂಚನೆ ಸಂಖ್ಯೆ: ದಿನಾಂಕ : 18.07.2018
2. ಈ ಕಛೇರಿಯ ಸಮ ಸಂಖ್ಯೆಯ ದಿನಾಂಕ : 23.02.2022ರ ಸುತ್ತೋಲೆ
3. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಕಾಶಿಇ/62/ಖಾಅಬ/2021-22/ ಬಸ್ಥಾವಿ ದಿನಾಂಕ : 17.03.2022 ಹಾಗೂ 18.08.2022.

***********

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಖಾಸಗಿ ಅನುದಾನಿತ ಪದವಿ, ಶಿಕ್ಷಣ ಹಾಗೂ ಕಾನೂನು ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು, ದೈಹಿಕ ಶಿಕ್ಷಣ ಬೋಧಕರುಗಳಿಗೆ ಪರಿಷ್ಕೃತ 2016ರ ಯುಜಿಸಿ ವೇತನಶ್ರೇಣಿಯಲ್ಲಿ ಉನ್ನತ ಎಜಿಪಿಗಾಗಿ ಮಾರ್ಗಸೂಚಿಗಳನ್ನು ಹಾಗೂ ಪ್ರಾಂಶುಪಾಲರ ಹಂತದ ಸಮಿತಿಯಲ್ಲಿ ಇರಬೇಕಾದ ಸದಸ್ಯರ ಬಗ್ಗೆ ಮಾಹಿತಿಯನ್ನು ನೀಡಲಾಗಿರುತ್ತದೆ.

ಉಲ್ಲೇಖ (1)ರ ಯುಜಿಸಿ ಅಧಿಸೂಚನೆ ದಿನಾಂಕ : 17.07.2021ರವರೆಗೂ 2006ರ ಯುಜಿಸಿ ವೇತನಶ್ರೇಣಿಯಲ್ಲಿ ಪ್ರಸ್ತಾವನೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. 2016ರ ಯುಜಿಸಿ ವೇತನಶ್ರೇಣಿಯಲ್ಲಿ ಹಾಗೂ ಉಲ್ಲೇಖ (1)ರ ಕಂಡಿಕೆ 6.3 VI ರನ್ವಯ ಅರ್ಹತಾ ದಿನಾಂಕಕ್ಕೆ 3 ತಿಂಗಳು ಮುಂಚಿತವಾಗಿ ಲೆವೆಲ್ 13ಎ ಗೆ ಪ್ರಸ್ತಾವನೆಯನ್ನು ಸಮಿತಿಗೆ ಸಲ್ಲಿಸಬಹುದಾಗಿದೆ.

ಕೇಂದ್ರ ಕಛೇರಿಯಲ್ಲಿ ವೃತ್ತಿಪದೋನ್ನತಿ ಸಮಿತಿಯಲ್ಲಿ ವಿಶ್ವವಿದ್ಯಾಲಯದ ಪ್ರತಿನಿಧಿಗಳು ಹಾಗೂ ವಿಷಯತಜ್ಞರು ಇರುವುದರಿಂದ ಕಾಲೇಜು ಹಂತದ ಸಮಿತಿಯಲ್ಲಿ ಇವರುಗಳನ್ನು ಕೈಬಿಡಬಹುದಾಗಿದೆ ಎಂದು ಎಲ್ಲಾ ಪ್ರಾದೇಶಿಕ ಕಛೇರಿಯ ಜಂಟಿ ನಿರ್ದೇಶಕರುಗಳಿಗೆ ಹಾಗೂ ಎಲ್ಲಾ ಖಾಸಗಿ ಅನುದಾನಿತ ಕಾಲೇಜುಗಳ ಆಡಳಿತ ಮಂಡಳಿ/ಪ್ರಾಂಶುಪಾಲರುಗಳಿಗೆ ಈ ಮೂಲಕ ತಿಳಿಸಲಾಗಿದೆ.

ಅರ್ಹರಿರುವ ಎಲ್ಲಾ ಸಹಾಯಕ ಪ್ರಾಧ್ಯಾಪಕರುಗಳು ದೈಹಿಕ ಶಿಕ್ಷಣ ಬೋಧಕರು ಹಾಗೂ ಗ್ರಂಥಪಾಲಕರುಗಳ ಪ್ರಸ್ತಾವನೆಗಳನ್ನು ಕೇಂದ್ರ ಕಛೇರಿಗೆ ನವೆಂಬರ್ ಅಂತ್ಯಕ್ಕೆ ಸಲ್ಲಿಸಲು ಸೂಚಿಸಲಾಗಿದೆ.

27.10.22
ಹೆಚ್ಚುವರಿ ನಿರ್ದೇಶಕರು
ಕಾಲೇಜು ಶಿಕ್ಷಣ ಇಲಾಖೆ

ಇವರಿಗೆ

1. ಜಂಟಿ ನಿರ್ದೇಶಕರು ಪ್ರಾದೇಶಿಕ ಕಛೇರಿ ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಧಾರವಾಡ, ಶಿವಮೊಗ್ಗ, ಮಂಗಳೂರು, ಕಲಬುರಗಿ (ಮೇಲಿನ ವಿಷಯವನ್ನು ಎಲ್ಲಾ ಖಾಸಗಿ ಅನುದಾನಿತ ಕಾಲೇಜುಗಳ ಆಡಳಿತ ಮಂಡಳಿಗಳ ಗಮನಕ್ಕೆ ತರಲು ಈ ಮೂಲಕ ಸೂಚಿಸಲಾಗಿದೆ)

ಮ.ತಿ.ನೋ.

File 177 AGP 2018-19 Circular 2016 UGC